# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 115 (129)
**ಸದಸ್ಯರ ಹೆಸರು** : ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
**ಉತ್ತರಿಸಬೇಕಾದ ದಿನಾಂಕ** : 13-09-2021
**ಉತ್ತರಿಸುವ ಸಚಿವರು** : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ, ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾದ ಒಟ್ಟು ಶಿಕ್ಷಕರು ಹಾಗೂ ಉಪನ್ಯಾಸಕರ ಹುದ್ದೆಗಳೆಷ್ಟು; | ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಮಂಜೂರಾದ ಒಟ್ಟು ವೃಂದ ಬಲ – **1,88,540**<br><br>ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಿಗೆ ಮಂಜೂರಾದ ಒಟ್ಟು ವೃಂದ ಬಲ – **52,630**<br><br>ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮಂಜೂರಾದ ಒಟ್ಟು ವೃಂದ ಬಲ – **12,857** |
| ಆ. | ಇದರಲ್ಲಿ ಭರ್ತಿಯಾದ ಹುದ್ದೆಗಳೆಷ್ಟು; ಖಾಲಿಯಿರುವ ಹುದ್ದೆಗಳೆಷ್ಟು; (ವಿವರ ನೀಡುವುದು) | ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ ಕಾರ್ಯನಿರತ ಹುದ್ದೆಗಳ ಸಂಖ್ಯೆ – **1,62,727** ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ – **25,813**<br><br>ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯನಿರತ ಹುದ್ದೆಗಳು – **36,453** ಹಾಗೂ ಖಾಲಿ ಹುದ್ದೆಗಳು – **15,907**<br><br>ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರತ ಹುದ್ದೆಗಳು - **9,354** ಹಾಗೂ ಖಾಲಿ ಹುದ್ದೆಗಳು – **3,503** |
| ಇ. | ಈ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? | ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ **25,813** ಹುದ್ದೆಗಳಲ್ಲಿ ಪ್ರಸ್ತುತ ಸಾಲಿನಲ್ಲಿ **5,000** ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಸಂಬಂಧ ಪರಿಶೀಲನೆಯಲ್ಲಿದೆ.<br><br>ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಒಟ್ಟು **5,500** ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.<br><br>ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಒಟ್ಟು **3503** ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ನಿರ್ದೇಶಕರಿಂದ ಪ್ರಸ್ತಾವನೆ ಪಡೆದು ಪರಿಶೀಲಿಸಲಾಗುವುದು. |

**ಸಂಖ್ಯೆ**: ಇಪಿ 28 ಪಿಎಂಎ 2021

**(ಬಿ.ಸಿ. ನಾಗೇಶ್)**
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ
ಹಾಗೂ ಸಕಾಲ ಸಚಿವರು